# <u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ: **2014-15ನೇ** ಸಾಲಿನಲ್ಲಿ ಸರ್ಕಾರೇತರ ಸಂಸ್ಥೆ/ ಸಹಕಾರ ಸಂಸ್ಥೆಗಳ ಸಹಯೋಗದಲ್ಲಿ ಸಮಸ್ಯಾತ್ಮಕ ಗ್ರಾಮೀಣ ಜನವಸತಿಗಳಲ್ಲಿ 2000 ನೀರು ಶುದ್ಧೀಕರಣ ಘಟಕಗಳನ್ನು ಅಳವಡಿಸಲು ಆಯ್ಕೆಯಾಗಿರುವ ಜನವಸತಿಗಳನ್ನು ಅನುಮೋದಿಸುವ ಕುರಿತು.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 86 ಗ್ರಾನೀಸ(5)2013, ದಿನಾಂಕ:24.05.2014.
2. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 20 ಗ್ರಾನೀಸ(8)2014, ದಿನಾಂಕ:25.09.2014.
3. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 20 ಗ್ರಾನೀಸ(8)2014, ದಿನಾಂಕ:30.09.2014.
4. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 67 ಗ್ರಾನೀಸ(8)2015 (ಭಾಗ-1), ದಿನಾಂಕ:30.01.2015.

ಪೀಠಿಕೆ:

ಮೇಲೆ ಓದಲಾದ (4)ರ ಆದೇಶದಲ್ಲಿ **2014-15ನೇ** ಸಾಲಿನಲ್ಲಿ ಸರ್ಕಾರೇತರ ಸಂಸ್ಥೆ/ ಸಹಕಾರ ಸಂಸ್ಥೆಗಳ ಸಹಯೋಗದಲ್ಲಿ ಸಮಸ್ಯಾತ್ಮಕ ಗ್ರಾಮೀಣ ಜನವಸತಿಗಳಲ್ಲಿ 2000 ನೀರು ಶುದ್ಧೀಕರಣ ಘಟಕಗಳನ್ನು ಅಳವಡಿಸಲು ಆಯ್ಕೆಯಾಗಿರುವ ಜನವಸತಿಗಳನ್ನು ಅನುಮೋದಿಸುವ ಕುರಿತು ಆದೇಶವನ್ನು ಹೊರಡಿಸಲಾಗಿದ್ದು, ಸದರಿ ಆದೇಶದಲ್ಲಿ ಮೊದಲ ಹಂತದಲ್ಲಿ ಘೋಷಿತ 2000 ನೀರು ಶುದ್ಧೀಕರಣ ಘಟಕಗಳ ಪೈಕಿ 1000 ನೀರು ಶುದ್ಧೀಕರಣ ಘಟಕಗಳನ್ನು ಅಳವಡಿಸಲು ಜನವಸತಿಗಳನ್ನು ಆಯ್ಕೆ ಮಾಡಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿತ್ತು. ಮುಂದುವರೆದು ಸದರಿ ಆದೇಶದಲ್ಲಿ ಪ್ರತಿ ಘಟಕಕ್ಕೆ ಸರ್ಕಾರದ ಪಾಲಿನ ಗರಿಷ್ಠ ರೂ.5.00ಲಕ್ಷ ಅಥವಾ ಸದರಿ ಘಟಕದ ಸಂಪೂರ್ಣ ವೆಚ್ಚ (ಶುದ್ಧೀಕರಣ ಘಟಕ, ವಿದ್ಯುದ್ದೀಕರಣ ವೆಚ್ಚ ಹಾಗೂ ಸಂಸ್ಕರಣಾ ಕೊಠಡಿ ನಿರ್ಮಾಣ)ದ ಬೆಂಗಳೂರು (ಗ್ರಾ), ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಕೊಳವೆ ಬಾವಿಗಳನ್ನು ಅತಿ ಹೆಚ್ಚು ಆಳದವರೆಗೂ ಕೊರೆಯುತ್ತಿರುವ ಹಿನ್ನೆಲೆಯಲ್ಲಿ ಕಲುಷಿತ ನೀರು ದೊರಕುವ ಸಂಭವ ಅತಿ ಹೆಚ್ಚು ಇರುತ್ತದೆ. ಸದರಿ ಕಾರಣ ಪೈಕಿ ಶೇ 50%ರಷ್ಟು ಇದರಲ್ಲಿ ಯಾವುದು ಕಡಿಮೆಯೋ ಆ ಸಹಾಯಧನವನ್ನು ಭರಿಸಲು ಅನುಮತಿ ನೀಡಲಾಗಿತ್ತು. ಹಾಲಿ ಬೆಂಗಳೂರು (ಗ್ರಾ), ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಅಳವಡಿಸಲಾಗುತ್ತಿರುವ ನೀರು ಶುದ್ಧೀಕರಣ ಘಟಕಗಳ ಸಹಾಯಧನವನ್ನು ಪ್ರತಿ ಘಟಕಕ್ಕೆ ರೂ.7.50ಲಕ್ಷಕ್ಕೆ NRDWPಯಡಿ ಹೆಚ್ಚಿಸಲು ನಿರ್ಧರಿಸಿದೆ. ಆದ್ದರಿಂದ ಈ ಆದೇಶ.

## <u>ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 67 ಗ್ರಾನೀಸ(8)2015 (ಭಾಗ-1), ದಿನಾಂಕ:30.06.2015</u>

ಪೀಠಿಕೆಯಲ್ಲಿನ ಪ್ರಸ್ತಾವನೆಯನ್ನು ಪರಿಶೀಲಿಸಿ, 2014-15ನೇ ಸಾಲಿನಲ್ಲಿ ಬೆಂಗಳೂರು (ಗ್ರಾ), ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಅಳವಡಿಸಲಾಗುತ್ತಿರುವ ನೀರು ಶುದ್ಧೀಕರಣ ಘಟಕಗಳ ಸಹಾಯಧನವನ್ನು ಪ್ರತಿ ಘಟಕಕ್ಕೆ ರೂ.7.50ಲಕ್ಷದಂತೆ ಭರಿಸಲು ಪರಿಷ್ಕೃತ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

2. ಉಳಿದಂತೆ ಉಲ್ಲೇಖ (4)ರಲ್ಲಿನ ಸರ್ಕಾರದ ಆದೇಶದಲ್ಲಿರುವ ಮಾನದಂಡಗಳನ್ವಯ ಕ್ರಮವಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜಿ. ಕೃಷ್ಣಪ್ಪ)
ಸರ್ಕಾರದ ಉಪಕಾರ್ಯದರ್ಶಿ(ಗ್ರಾನೀಸ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
ಫೋನ್ & ಫ್ಯಾಕ್ಸ್: 080- 22233175

ಪ್ರತಿಗಳು:
1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.

4. ಉಪ ಮಹಾಲೇಖಪಾಲರು, ಮಹಾಲೇಖಪಾಲರು(ಎಯು-1)ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
8. ವಿಶೇಷಾಧಿಕಾರಿಗಳು(ಜಿಪಂ)ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು-1.
9. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು-1.
10. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 1ನೇ ಮಹಡಿ, 'E' Block, K.H.B Complex, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-09.
11. ಮುಖ್ಯ ಲೆಕ್ಕಾಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, 'E' Block, K.H.B Complex, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-09.
12. ಬೆಂಗಳೂರು (ಗ್ರಾ), ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
13. ಬೆಂಗಳೂರು (ಗ್ರಾ), ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
14. ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ ಬೆಂಗಳೂರು ವೃತ್ತ.
15. ಬೆಂಗಳೂರು (ಗ್ರಾ), ಕೋಲಾರ ಮತ್ತು ಚಿಕ್ಕಬಳ್ಳಾಪುರ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳ ಕಾರ್ಯಪಾಲಕ ಅಭಿಯಂತರರು.
16. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ ಇಲಾಖೆ, ಬೆಂಗಳೂರು.
17. ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ನಂ.49, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
18. ಜಿಲ್ಲಾ ಖಜಾನಾಧಿಕಾರಿಗಳು, ಬೆಂಗಳೂರು.
19. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
20. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿ.
21. ಆಯುಕ್ತರು ಮತ್ತು ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, 'E' Block, K.H.B complex, ಕಾವೇರಿ ಭವನ, ಕೆ.ಜಿ ರಸ್ತೆ, ಬೆಂಗಳೂರು-560009ರವರ ಆಪ್ತ ಕಾರ್ಯದರ್ಶಿ.
22. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಸಹಾಯಕರು.
23. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ನಂ.309, 3ನೇ ಮಹಡಿ, ಗೇಟ್ ನಂ.1, ಬಹುಮಹಡಿಗಳ ಕಟ್ಟಡ, ಅಂಬೇಡ್ಕರ್ ವೀಧಿ, ಬೆಂಗಳೂರು-560001.
24. ಗ್ರಾ.ಅ.ಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ-(10ಪ್ರತಿಗಳು).
25. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5ಪ್ರತಿಗಳು)
26. ರಾಜ್ಯ ಪತ್ರಾಗಾರ ಇಲಾಖೆ(ಬಿಡಿ ಪ್ರತಿ ಶಾಖೆ)
27. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.